## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಮಲ್ಲಪ್ಪನಹಳ್ಳಿ ಮತ್ತು ಇತರೆ 19 ಜನವಸತಿಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಮಾಡುವ ಯೋಜನೆಗೆ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:18.08.2021ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ ನಡವಳಿಗಳು ಮತ್ತು ದಿನಾಂಕ:21.10.2021ರಂದು ನಡೆದ ರಾಜ್ಯ ತಾಂತ್ರಿಕ ಸಲಹಾ ಸಮಿತಿ ಸಭೆಯ (STA) ನಡವಳಿಗಳು.
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರ ಇ–ಆಫೀಸ್ ಕಡತ ಸಂ:RDWSD-TECHOCN/21/2022

---

**<u>ಪೀಠಿಕೆ:</u>**

ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಮಲ್ಲಪ್ಪನಹಳ್ಳಿ ಮತ್ತು ಇತರೆ 19 ಜನವಸತಿಗಳಿಗೆ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು **ರೂ.10.74ಕೋಟಿ** ಅಂದಾಜಿನ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ PSRಗೆ ದಿನಾಂಕ:18.08.2021ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿಯಲ್ಲಿ ಅನುಮೋದನೆ ಪಡೆಯಲಾಗಿದೆ. ತದನಂತರ ದಿನಾಂಕ:21.10.2021ರಂದು ನಡೆದ ರಾಜ್ಯ ತಾಂತ್ರಿಕ ಸಮಿತಿ(STA)ಯಲ್ಲಿ ಹಾಗೂ ದಿನಾಂಕ:08.12.2021ರಂದು ನಡೆದ 4ನೇ ಅಪೆಕ್ಸ್ ಕಮಿಟಿ ಸಭೆಯಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿದೆ.

ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಮಲ್ಲಪ್ಪನಹಳ್ಳಿ ಮತ್ತು ಇತರೆ 19 ಜನವಸತಿಗಳಿಗೆ ಕೊಳವೆ ನೀರು ಸರಬರಾಜು ಯೋಜನೆ / ಕಿರು ನೀರು ಸರಬರಾಜು ಯೋಜನೆಗಳ ಅಡಿಯಲ್ಲಿ ತೆರದ ಕೊಳವೆ ಬಾವಿಯನ್ನು ಜಲಮೂಲವನ್ನಾಗಿ ಪರಿಗಣಿಸಿ ನೀರು ಸರಬರಾಜು ಮಾಡಲಾಗುತ್ತಿದೆ. ಹಾಸನ ಜಿಲ್ಲೆಯ ಗ್ರಾಮೀಣ ಪ್ರದೇಶಗಳು ಹೆಚ್ಚಾಗಿ ಅಂತರ್ಜಲ ಮೂಲವನ್ನು ಅವಲಂಬಿಸಿದ್ದು, ನೀರಿನ ತೀವ್ರ ಕೊರತೆ ಉಂಟಾಗುತ್ತಿರುತ್ತದೆ. ಹೀಗಾಗಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಡಿ ಕೈಗೊಂಡು ಹೇಮಾವತಿ ನದಿಯನ್ನು ಜಲಮೂಲವನ್ನಾಗಿ ಪರಿಗಣಿಸಿದ್ದು, 55 LPCDಯಂತೆ ಶುದ್ಧ ಕುಡಿಯುವ ನೀರನ್ನು ಪೂರೈಸಲು ಅನುವಾಗುವಂತೆ ಈ ಯೋಜನೆಯನ್ನು ತಯಾರಿಸಲಾಗಿದೆ. ಕೇಂದ್ರ ಪುರಸ್ಕೃತ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಕೇಂದ್ರ ಮತ್ತು ರಾಜ್ಯ ವಲಯಗಳಡಿ ವೆಚ್ಚವನ್ನು ಭರಿಸಲು ನಿರ್ಣಯಿಸಲಾಗಿದೆ.

ಚಾಲ್ತಿ ಪಾರದರ್ಶಕ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ **ಹಾಸನ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 145 ಗ್ರಾನೀಸ(4)2022 ಬೆಂಗಳೂರು, ದಿನಾಂಕ:24.02.2022.** 358

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಮಲ್ಲಪ್ಪನಹಳ್ಳಿ ಮತ್ತು ಇತರೆ 19 ಜನವಸತಿಗಳಿಗೆ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು **ರೂ.10.74ಕೋಟಿ (ಹತ್ತು ಕೋಟಿ ಎಪ್ಪತ್ತ್ನಾಲ್ಕು ಲಕ್ಷ ರೂಪಾಯಿಗಳು ಮಾತ್ರ) ಗಳ** ಅಂದಾಜಿನಲ್ಲಿ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಬಾಬ್ತು ಸೇರಿದಂತೆ ಕೇಂದ್ರ ಪುರಸ್ಕೃತ ಜಲ ಜೀವನ್ ಮಿಷನ್ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ;**

(ಅ) ಈ ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಡೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2022-23ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಉ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಊ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 11 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಋ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ / ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಎ) ಯೋಜನೆ ಅನುಷ್ಠಾನಗೊಂಡು ಗುತ್ತಿಗೆದಾರರ 5 ವರ್ಷಗಳ O&M ನಿರ್ವಹಣಾ ಅವಧಿ ಮುಗಿದ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

ಎ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

3. ಈ ಆದೇಶವನ್ನು **ಆರ್ಥಿಕ ಇಲಾಖೆ ಟಿಪ್ಪಣಿ ಸಂ:ಆಇ 59 ವೆಚ್ಚ–6/2022 ದಿನಾಂಕ:27.01.2022**ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ(ಅಭಿವೃದ್ಧಿ),
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಹಾಸನ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ, ವಿಕಾಸಸೌಧ, ಬೆಂಗಳೂರು
7. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
9. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಹಾಸನ.**
11. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಮೈಸೂರು.**
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
14. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
15. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಹಾಸನ.**
16. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
17. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
18. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
19. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.